## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರವಿಂದಕುಮಾರ್ ಅರಳಿ ರವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ದಿನಾಂಕ:25-06-2019 ರಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ:124/ಸೇ.ನಿ.ಎ./2019 ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಸರ್ಕಾರಿ ನೌಕರರಲ್ಲದ ನೂರಾರು ಜನರಿಗೆ ಸರ್ಕಾರಿ ನೌಕರರೆಂದು ಅಧಿಕೃತವಾಗಿ ಪತ್ರ ನೀಡಿ ಅಕ್ರಮವಾಗಿ ಇಲಾಖೆ ಪರೀಕ್ಷೆ ಬರೆಯಲು ಅನುಮತಿ ನೀಡಿರುವುದು ಕಾನೂನು ಬಾಹಿರವಾಗಿರುವುದರಿಂದ ಅವುಗಳನ್ನು ಕೂಡಲೇ ರದ್ದುಪಡಿಸಬೇಕು ಹಾಗೂ ಸಂಬಂಧಿಸಿದವರ ಮತ್ತು ಇದಕ್ಕೆ ಸಹಕರಿಸಿದ ಇಲಾಖೆಯ ಅಧಿಕಾರಿಗಳ ಮೇಲೆ ಕಾನೂನು ರೀತಿ ಕ್ರಮ ಕೈಗೊಳ್ಳಬೇಕೆಂದು ಆದೇಶಿಸಿದ್ದರೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಉನ್ನತ ಅಧಿಕಾರಿಗಳು ಈವರೆವಿಗೂ ಸರ್ಕಾರದ ಆದೇಶವನ್ನು ಪಾಲಿಸದೇ ಇರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗಿರುತ್ತದೆ.**

**ಆದುದರಿಂದ, ಕೂಡಲೇ ಮೇಲ್ಕಂಡ ಕಾನೂನು ಬಾಹಿರವಾಗಿ ಇಲಾಖೆ ಪರೀಕ್ಷೆ ಬರೆದಿರುವವರ ನೇಮಕಾತಿಯನ್ನು ರದ್ದುಪಡಿಸಬೇಕೆಂದು ಹಾಗೂ ಸರ್ಕಾರದ ಆದೇಶವನ್ನು ಈವರೆವಿಗೂ ಅನುಷ್ಠಾನಕ್ಕೆ ತರದ ಅಧಿಕಾರಿಗಳ ಮೇಲೆ ಉನ್ನತ ಮಟ್ಟದ ತನಿಖೆ ನಡೆಸಿ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ.**

----

ಉತ್ತರ: ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಒಂದಾದ ಹಾಗೂ ತಳಹಂತದಲ್ಲಿ ಪ್ರಜಾಪ್ರಭುತ್ವದನ್ವಯ ಚುನಾಯಿತ ಸಂಸ್ಥೆಯಾಗಿರುವ ಗ್ರಾಮ ಪಂಚಾಯತಿಯು ಸ್ಥಳೀಯ ಸ್ವಯಂ ಸರ್ಕಾರವಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಹಿಸಿರುವ ವಿವಿಧ ಗ್ರಾಮೀಣಾಭಿವೃದ್ಧಿ ಯೋಜನೆಗಳು / ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿವೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತ್ ನೌಕರರು ಸರ್ಕಾರಿ ನೌಕರರಾಗಿರುವುದಿಲ್ಲ. ಇವರು ಗ್ರಾಮ ಪಂಚಾಯತಿಯ ನೌಕರರಾಗಿರುತ್ತಾರೆ. ಈ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುವ ನೌಕರರು ಇಲಾಖೆಗೆ ಸಂಬಂಧಿಸಿದ ನೀತಿ ನಿಯಮಗಳ ಬಗ್ಗೆ ಜ್ಞಾನ ಹೊಂದಲು ಇಲಾಖಾ ಪರೀಕ್ಷೆಗಳಲ್ಲಿ ಭಾಗವಹಿಸುವುದು. ಆಡಳಿತ ನಿರ್ವಹಣೆಗೆ ಪೂರಕವಾಗಿರುತ್ತದೆ.

ಉಡುಪಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀಮತಿ ವಸಂತ ಶೆಟ್ಟಿ, ಶ್ರೀಮತಿ ಮುತ್ತು ಮತ್ತು ಶ್ರೀಮತಿ ಮೀರಾ ಆರ್. ಕೋಟತಟ್ಟು ಇವರುಗಳು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಾಗಿ ನೇಮಕಾತಿ ಹೊಂದುವ ಪೂರ್ವದಲ್ಲಿ ಗ್ರಾಮ ಪಂಚಾಯತಿ ಗುಮಾಸ್ತರಾಗಿ ಕರ್ತವ್ಯ ನಿರ್ವಹಿಸಿದ್ದು, ಆ ಅವಧಿಯಲ್ಲಿ ಕಾರ್ಯದರ್ಶಿ ಹುದ್ದೆಗೆ ನಿಗಧಿಪಡಿಸಲಾದ ಇಲಾಖಾ ಪರೀಕ್ಷೆಗಳಾದ ಸಿ.ಡಿ. ಭಾಗ-1 ಮತ್ತು ಸಿ.ಡಿ. ಭಾಗ-2 ಮತ್ತು ಅಕೌಂಟ್ಸ್ ಲೋಯರ್ ಹಾಗೂ ಹೈಯರ್ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವುದಾಗಿ ತಿಳಿಸಿ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಾಗಿ ನೇಮಕಾತಿ ಹೊಂದಿದ ನಂತರ ಸದರಿ ನೌಕರರ ಪರಿವೀಕ್ಷಣಾ ಅವಧಿಯನ್ನು ಘೋಷಿಸಲು ಮತ್ತೊಮ್ಮೆ ಇಲಾಖಾ ಪರೀಕ್ಷೆಗಳನ್ನು ಪಾಸು ಮಾಡಬೇಕೆ ಎಂಬ ಬಗ್ಗೆ ಉಡುಪಿ ಜಿಲ್ಲಾ ಪಂಚಾಯತಿ ಕಛೇರಿಯಿಂದ ಸ್ಪಷ್ಟೀಕರಣ ಕೋರಿದ್ದು, ಅದರಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕಡತ ಸಂಖ್ಯೆ: ಗ್ರಾಅಪ 169 ಗ್ರಾಪಂಕಾ 2009 ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು) ಯ ಅಭಿಪ್ರಾಯ ಕೋರಲಾಗಿತ್ತು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು) ಯ ಕಡತ ಸಂಖ್ಯೆ: ಸಿಆಸುಇ 314 ಸೇನಿಎ 2009 (ಗ್ರಾಅಪ 169 ಗ್ರಾಪಂಕಾ 2009) ದಿನಾಂಕ:19-08-2009 ರಲ್ಲಿ ನೇಮಕಾತಿ ಹೊಂದಿದ ಹುದ್ದೆಗೆ ಇಲಾಖಾ ಪರೀಕ್ಷೆಗಳನ್ನು ನೇಮಕಾತಿ ಹೊಂದುವ ಮೊದಲೇ ಪಾಸು ಮಾಡಿದ್ದಲ್ಲಿ, ಪುನಃ ಸದರಿ ಇಲಾಖಾ ಪರೀಕ್ಷೆಗಳನ್ನು ಪಾಸು ಮಾಡುವ ಅವಶ್ಯಕತೆ ಇರುವುದಿಲ್ಲವೆಂದು ತಿಳಿಸಿರುತ್ತದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು) ಅಭಿಪ್ರಾಯದಂತೆ ಗ್ರಾಮ ಪಂಚಾಯತಿಯಲ್ಲಿ ಬಿಲ್‌ಕಲೆಕ್ಟರ್ / ಕ್ಲರ್ಕ್ / ಬೆರಳಚ್ಚುಗಾರರ ವೃಂದದ ನೌಕರರಾಗಿ ಸೇವೆ ಸಲ್ಲಿಸುತ್ತಿರುವಾಗ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದ್ದು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 / ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗೆ ನೇಮಕಾತಿ ಹೊಂದಿದ ನಂತರ ಮತ್ತೊಮ್ಮೆ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದುವ ಅವಶ್ಯಕತೆ ಇರುವುದಿಲ್ಲವೆಂದು ದಿನಾಂಕ:28-08-2009, 30-12-2013 ಮತ್ತು 01-10-2018 ರ ಸರ್ಕಾರದ ಪತ್ರಗಳಲ್ಲಿ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ.

ಕರ್ನಾಟಕ ಸಿವಿಲ್ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳು, 1974 ರ ಪ್ರಮುಖ ಉದ್ದೇಶವೇ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರು ಸಂಬಂಧಪಟ್ಟ ಇಲಾಖೆಗೆ ಸಂಬಂಧಿಸಿದ ಕಾಯ್ದೆ ಹಾಗೂ ನಿಯಮಗಳ ಬಗ್ಗೆ ತಿಳುವಳಿಕೆ ಹೊಂದಿರಬೇಕು ಎಂಬುವುದಾಗಿದೆ.

ಗ್ರಾಮ ಪಂಚಾಯತಿ ನೌಕರರು ಸ್ವ-ಇಚ್ಛೆಯಿಂದ ಇಲಾಖಾ ಪರೀಕ್ಷೆಗಳಲ್ಲಿ ಭಾಗವಹಿಸುವುದು ಅಕ್ರಮವೆನಿಸುವುದಿಲ್ಲ. ಇಲಾಖಾ ಪರೀಕ್ಷೆಯಲ್ಲಿ ಭಾಗವಹಿಸಬಾರದೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಯಾವುದೇ ಆದೇಶ ಅಥವಾ ಸುತ್ತೋಲೆ ಮುಖಾಂತರ ನಿರ್ಬಂಧಿಸಿರುವುದಿಲ್ಲ.

ಕರ್ನಾಟಕ ಲೋಕ ಸೇವಾ ಆಯೋಗವು ಇಲಾಖಾ ಪರೀಕ್ಷೆಗೆ ಅರ್ಜಿ ಸ್ವೀಕರಿಸಲು ಪ್ರಕಟಿಸಿರುವ ಅಧಿಸೂಚನೆ ದಿನಾಂಕ:15-02-1997 ರಲ್ಲಿ ಇಲಾಖಾ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅಂಶ 3 ರಲ್ಲಿ ಅರ್ಹತೆಯನ್ನು ನಿಗಧಿಪಡಿಸಿರುತ್ತಾರೆ. ಅದರ ಉದ್ಧೃತ ಭಾಗ ಈ ಕೆಳಕಂಡಂತಿರುತ್ತದೆ.

"ಡಿ) ಯಾವುದೇ ಸ್ಥಳೀಯ ಪ್ರಾಧಿಕಾರದ ಅಥವಾ ಕಾನೂನು ಮೇರೆಗೆ ರಚಿಸಲಾದ ಇತರ ನಿಗಮಗಳಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ನಿಯಮಿತ ಶುಲ್ಕಗಳನ್ನು ಸಂದಾಯ ಮಾಡಿದ ಮೇಲೆ ಅವರಿಗೆ ಅನ್ವಯವಾಗುವ ಸೇವೆಯ ನೇಮಕಾತಿ ಷರತ್ತುಗಳ ಮೇರೆಗೆ ಅವರು ತೇರ್ಗಡೆಯಾಗಬೇಕಾಗಿರುವಂತಹ ಸೇವಾ ಪರೀಕ್ಷೆಗಳಿಗೆ ಅರ್ಹರಾಗುತ್ತಾರೆ."

ಕರ್ನಾಟಕ ಲೋಕ ಸೇವಾ ಆಯೋಗವು ಇಲಾಖಾ ಪರೀಕ್ಷೆಗೆ ಅರ್ಜಿ ಸ್ವೀಕರಿಸಲು ಪ್ರಕಟಿಸುವ ಅಧಿಸೂಚನೆ ಸಂಖ್ಯೆ:ಪಿಎಸ್‌ಸಿ 263 ಇಪ(1) 208/2021-22, ದಿನಾಂಕ:11-10-2021 ರಲ್ಲಿ ಇಲಾಖಾ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅಂಶ 3 ರಲ್ಲಿ ಅರ್ಹತೆಯನ್ನು ನಿಗಧಿಪಡಿಸಿರುತ್ತಾರೆ. ಅದರ ಉದ್ಧೃತ ಭಾಗ ಈ ಕೆಳಕಂಡಂತಿರುತ್ತದೆ.

" 3) ಅರ್ಹತೆ:-

ಎ) ಈ ಕೆಳಕಂಡ ನೌಕರರು ಇಲಾಖಾ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

(ಅ) ಸರ್ಕಾರಿ ನೌಕರರು.

(ಆ) ಸರ್ಕಾರಿ ಸ್ವಾಮ್ಯಕ್ಕೊಳಪಟ್ಟ ನಿಗಮ / ಮಂಡಳಿ/ ಸ್ಥಳೀಯ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು / ಪ್ರಾಧಿಕಾರಿಗಳ ಖಾಯಂ ನೌಕರರು.

ಬಿ) ಗ್ರೂಪ್-'ಡಿ' ನೌಕರರು ಇಲಾಖಾ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ".

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 2(21) ರಲ್ಲಿ ಗ್ರಾಮ ಪಂಚಾಯತಿಗಳನ್ನು "ಸ್ಥಳೀಯ ಪ್ರಾಧಿಕಾರ" ವ್ಯಾಖ್ಯಾನದಡಿ ಸೇರಿಸಲಾಗಿದೆ.

ಸ್ಥಳೀಯ ಸಂಸ್ಥೆಗಳ ನೌಕರರು ಸಂಬಂಧಪಟ್ಟ ಕಛೇರಿಯ ಪ್ರಾಧಿಕಾರದ ಮೂಲಕ ಅರ್ಜಿ ಸಲ್ಲಿಸಲು ತಿಳಿಸಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರನ್ವಯ ನೇಮಕಗೊಂಡಿರುವ ಗ್ರಾಮ ಪಂಚಾಯತಿಯ ಬಿಲ್‌ಕಲೆಕ್ಟರ್ / ಕ್ಲರ್ಕ್ / ಬೆರಳಚ್ಚುಗಾರ ವೃಂದದ ನೌಕರರು ಸ್ಥಳೀಯ ಸಂಸ್ಥೆಯ ಖಾಯಂ ನೌಕರರಾಗಿದ್ದು, ಅವರಿಗೆ 6 ವರ್ಷಗಳ ಸೇವೆಯ ನಂತರ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ರಾಜ್ ಇಲಾಖೆಯ ರಾಜ್ಯ ಸಿವಿಲ್ ಸೇವೆಗೆ ಸೇರಿದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಯ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 / ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಸೇವೆಯೊಳಗೆ ನೇರ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯತಿಗಳು ಸ್ಥಳೀಯ ಸಂಸ್ಥೆಯಾಗಿದ್ದು, ಗ್ರಾಮ ಪಂಚಾಯತಿ ನೌಕರರು ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವುದರಿಂದ ಇಲಾಖೆಯಿಂದ ಸ್ಥಳೀಯ ಸಂಸ್ಥೆಗೆ ವಹಿಸಿರುವ ಕಾರ್ಯ ಜವಾಬ್ದಾರಿ ಮತ್ತು ಯೋಜನೆಗಳನ್ನು ಅನುಷ್ಠಾನಗೊಳಿಸಲು ಸಹಾಯವಾಗುತ್ತದೆ. ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದನ್ನು ಕ್ರಿಮಿನಲ್ ಅಪರಾಧವೆಂದು ಪರಿಗಣಿಸಲಾಗದು. ಗ್ರಾಮ ಪಂಚಾಯತಿಗಳು ಸ್ಥಳೀಯ ಸ್ವಯಂ ಸರ್ಕಾರವಾಗಿದ್ದು, ಅಲ್ಲಿನ ನೌಕರರು ಸರ್ಕಾರವು ವಹಿಸುವ ಕರ್ತವ್ಯ ಹಾಗೂ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದು, ಗ್ರಾಮ ಪಂಚಾಯತಿಗಳಿಂದ ನೇಮಕಗೊಂಡ ನೌಕರರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ಕಾಯ್ದೆಗಳಲ್ಲಿನ ವಿಷಯಗಳ ಬಗ್ಗೆ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವುದು ಅವರುಗಳ ದಕ್ಷತೆಯನ್ನು ಹೆಚ್ಚಿಸಲು ಸಹಕಾರವಾಗುವ ಕಾರಣದಿಂದ ಇದನ್ನು ಅಕ್ರಮವೆಂದು ಪರಿಗಣಿಸಲಾಗದು.

ಗ್ರಾಮ ಪಂಚಾಯತಿ ನೌಕರರು ಕರ್ನಾಟಕ ಲೋಕ ಸೇವಾ ಆಯೋಗವು ನಡೆಸುವ ಇಲಾಖಾ ಪರೀಕ್ಷೆಗಳನ್ನು ತೆಗೆದುಕೊಳ್ಳುವ ಸಂದರ್ಭದಲ್ಲಿ ಕೆ.ಪಿ.ಎಸ್.ಸಿ. ಯಿಂದ ನಿಗಧಿಪಡಿಸಿರುವ ಪರೀಕ್ಷಾ ಶುಲ್ಕವನ್ನು ಸದರಿ ನೌಕರರು ಪಾವತಿಸಿ, ಪರೀಕ್ಷೆಗೆ ಹಾಜರಾಗಿ ಉತ್ತೀರ್ಣರಾಗಿರುವುದರಿಂದ / ಉತ್ತೀರ್ಣರಾಗುವುದರಿಂದ ಸರ್ಕಾರದ ಬೊಕ್ಕಸಕ್ಕೆ ಯಾವುದೇ ರೀತಿಯಲ್ಲಿ ಕೋಟ್ಯಾಂತರ ರೂಪಾಯಿ ನಷ್ಟವಾಗುವುದಿಲ್ಲ.

ಗ್ರಾಮ ಪಂಚಾಯತಿ ನೌಕರರುಗಳು ಇಲಾಖಾ ಪರೀಕ್ಷೆಗಳನ್ನು ತೆಗೆದುಕೊಂಡು ಉತ್ತೀರ್ಣರಾಗಿರುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಳುಹಿಸಿರುವ ಅನಧಿಕೃತ ಟಿಪ್ಪಣಿ ಸಂಖ್ಯೆ: ಸಿಆಸುಇ 124 ಸೇನಿಎ 2019, ದಿನಾಂಕ:25.06.2019 ರ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ: ಗ್ರಾಅಪ 78 ಗ್ರಾಪಂಅ 2022**

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.